# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1696 |
| 2) | ಸದಸ್ಯರ ಹೆಸರು | : | ಶ್ರೀ. ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | : | 19.03.2021 |
| 4) | ಉತ್ತರಿಸುವವರು | : | ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | "ಬಾಗಲಕೋಟೆ-ಕುಡುಚಿ" ರೈಲು ಮಾರ್ಗ ನಿರ್ಮಾಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಸಲಾಗುವುದು; | ಬಾಗಲಕೋಟೆ -ಕುಡುಚಿ ನಡುವಿನ 30ಕಿ.ಮೀ ವರೆಗಿನ ರೈಲು ಮಾರ್ಗವು ಪೂರ್ಣಗೊಂಡಿದ್ದು, ರೈಲು ಸಂಚಾರವನ್ನು ಆರಂಭಿಸಲಾಗಿದೆ. ಕಜ್ಜಿದೋಣಿಯಿಂದ ಕುಡಚಿವರೆಗಿನ ಭೂಸ್ವಾಧೀನ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ನೈರುತ್ಯ ರೈಲ್ವೆಯಿಂದ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಕಾಮಗಾರಿಯನ್ನು ಪೂರ್ಣಗೊಳಸಲು ಕಾಲಮಿತಿ ನಿಗಧಿ ಪಡಿಸಿರುವುದಿಲ್ಲ. |
| ಆ | ಸದರಿ ರೈಲು ಮಾರ್ಗದಲ್ಲಿ ಬಾಗಲಕೋಟೆದಿಂದ ಲೋಕಾಪುರದವರೆಗಿನ ಮಾರ್ಗವು ಪೂರ್ಣಗೊಂಡಿರುವುದು ನಿಜವೇ; | ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಇ) | ಪೂರ್ಣಗೊಂಡಿದ್ದಲ್ಲಿ, ಮುಂದಿನ ಹಂತವಾದ "ಲೋಕಾಪುರದಿಂದ ಕುಡಚಿ" ವರೆಗಿನ ರೈಲು ಮಾರ್ಗದ ನಿರ್ಮಾಣ ಕಾಮಗಾರಿಯನ್ನು ಇನ್ನೂ ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು; ಪ್ರಾರಂಭವಾಗಿದ್ದರೆ ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಸಲಾಗುವುದು. | ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುವುದರಿಂದ ಪ್ರಸ್ತುತ ಲೋಕಾಪುರ ಗ್ರಾಮದ ಜಮೀನುಗಳ ಭೂಸ್ವಾಧೀನವಾಗುತ್ತಿದ್ದು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ 2013ರ ಕಲಂ 11(1) ರ ಅಧಿಸೂಚನೆಗೆ ಅನುಮೋದನೆ ನೀಡಲಾಗಿದೆ. |
| ಈ) | ಸದರಿ ರೈಲು ಮಾರ್ಗ ನಿರ್ಮಾಣಕ್ಕೆ ಎಷ್ಟು ಎಕರೆ-ಭೂ-ಪ್ರದೇಶದ ಅಗತ್ಯವಿದೆ; ಹಾಗೂ ಸದರಿ ಕಾಮಗಾರಿಗೆ ಎಷ್ಟು ಎಕರೆ ಭೂಮಿಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ಮತ್ತು ಭೂಸ್ವಾಧೀನ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ. | • ಈ ಯೋಜನೆಗೆ ಒಟ್ಟು 2487.15 ಎಕರೆ ಜಮೀನಿನ ಅಗತ್ಯವಿದೆ.<br>• ಈವರೆಗೂ 1330.15 ಎಕರೆ ಜಮೀನನ್ನು ಭೂಸ್ವಾದೀನ ಪಡಿಕೊಳ್ಳಲಾಗಿದೆ.<br>• ಉಳಿದ 1157 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಉ) | ಭೂ-ಸ್ವಾಧೀನಕ್ಕೆ ಒಳಪಟ್ಟ ಜಮೀನುಗಳ ರೈತರುಗಳಿಗೆ ನೀಡಿದ ಪರಿಹಾರ ಧನವೆಷ್ಟು (ವಿವರ ನೀಡುವುದು) | ಬಾಗಲಕೋಟೆ -ಕುಡುಚಿ ರೈಲು ಮಾರ್ಗ ಯೋಜನೆಯ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರದಿಂದ ಇದುವರೆಗೂ ರೂ. 275.81 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

..2)

| | | |
|---|---|---|
| ಊ) | "ಬಾಗಲಕೋಟೆ-ಕುಡಚಿ" ರೈಲು ಮಾರ್ಗ ನಿರ್ಮಾಣ ಕಾಮಗಾರಿಗೆ ತಗಲುವ ಸಂಪೂರ್ಣ ವೆಚ್ಚ ಎಷ್ಟು; ಅದರಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಭರಸಬೇಕಾದ ಹಣಕಾಸಿನ ಪ್ರಮಾಣವೆಷ್ಟು? (ಸಂಪೂರ್ಣ ವಿವರ ನೀಡುವುದು) | • ಬಾಗಲಕೋಟೆ-ಕುಡಚಿ ರೈಲು ಮಾರ್ಗ ನಿರ್ಮಾಣ ಕಾಮಗಾರಿಯ ಒಟ್ಟು ಅಂದಾಜು ವೆಚ್ಚ ರೂ.816.14 ಕೋಟಿಗಳಾಗಿದೆ.<br>• ಇದರಲ್ಲಿ ಕೇಂದ್ರ ಸರ್ಕಾರದ ಪಾಲು ರೂ. 408.07 ಕೋಟಿಗಳು.<br>• ರಾಜ್ಯ ಸರ್ಕಾರದ ಪಾಲು ರೂ. 408.07 ಕೋಟಿಗಳಾಗಿದ್ದು, ಈ ಯೋಜನೆಗೆ ಅಗತ್ಯವಿರುವ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡು ಉಚಿತವಾಗಿ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗುತ್ತದೆ.<br>• ಪ್ರಸ್ತುತ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ ರೂ. 1525.00 ಕೋಟಿಗಳಿಗೆ ಏರಿಕೆಯಾಗಿದ್ದು, ಪ್ರಸ್ತಾವನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಮೂಅಇ 65 ರಾರಾಹೆ 2021/ಇ

16/03/2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು